**ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\477\2014\ಸನಿಕಾಸ-1

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:02/06/2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ದೂರುದಾರರಾದ ಶ್ರೀ.ಹೆಚ್.ಇ. ಲೋಕೇಶ್,, ಗ್ರಾಮ ಪಂಚಾಯತಿ ಸದಸ್ಯರು, ಹುಲಿಯೂರುದುರ್ಗ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ತುಮಕೂರು ಜಿಲ್ಲೆಯ, ಕುಣಿಗಲ್ ತಾಲ್ಲೂಕು ಹುಲಿಯೂರುದುರ್ಗ ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀ ಹೆಚ್.ಇ. ಲೋಕೇಶ್ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪನಿರ್ದೇಶಕರಾಗಿದ್ದ, ಶ್ರೀ ಶಿವನಂಜಪ್ಪ, (ಇನ್ನು ಮುಂದೆ "ಎದುರುದಾರ" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2) **ದೂರಿನ ಸಂಕ್ಷಿಪ್ತ ವಿವರಣೆ:** ತುಮಕೂರು ಜಿಲ್ಲೆ, ಕುಣಿಗಲ್ ತಾಲ್ಲೂಕು, ಹಸಿಗೆ ಹೋಬಳಿಯ ಸ.ನಂ.131 ರ ಅಮೃತ್ ಕಾವಲ್ ಹಾಲೇಗುಡ್ಡೆಯಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಸುತ್ತಿದ್ದು ಆ ಪ್ರದೇಶದಲ್ಲಿ ಜಲ್ಲಿ ಕ್ರಷರ್ ಮಾಡಿಕೊಂಡು ಮದ್ದು ಗುಂಡುಗಳನ್ನು ಸುಡುತ್ತಿದ್ದು, ಅಕ್ಕ ಪಕ್ಕದ ಗ್ರಾಮಗಳ ಮನೆಗಳು ಬಿರುಕು ಬಿಟ್ಟಿವೆ. ಮದ್ಯದಲ್ಲಿ ಅರಣ್ಯ ಪ್ರದೇಶವಿದ್ದು, ಪ್ರಾಣಿ ಪಕ್ಷಿಗಳು ನಾಶವಾಗುತ್ತಿವೆ, ಕೃಷಿ ಜಮೀನಿಗೆ ಹಾಗೂ ಕೊಳವೆ ಬಾವಿಗೆ ತೊಂದರೆ ಆಗುತ್ತಿದೆ. ಸಾಂಕ್ರಾಮಿಕ ರೋಗಗಳು ಹರಡುತ್ತಿವೆ ಹಾಗೂ ಸಾರ್ವಜನಿಕರಿಗೂ ಸಹಾ ತೊಂದರೆ ಆಗುತ್ತಿವೆ. ನಿಯಮಾವಳಿಗಳನ್ನು ಅನುಸರಿಸದೇ ಎದರುದಾರರು ಕಲ್ಲು ಗಣಿಗಾರಿಕೆಗೆ ಅನುಮತಿ ನೀಡಿದ್ದು, ಅದನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುಬೇಕೆಂದು ಕೋರಿದ್ದಾರೆ.

3) ಸದರಿ ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ಸದರಿ ಕಲ್ಲು ಗಣಿಗಾರಿಕೆಗೆ ಸಂಬಂಧಪಟ್ಟಂತೆ ನೀಡಲಾಗಿದ್ದ ಪರವಾನಿಗೆ ಅಂತ್ಯಗೊಂಡಿದ್ದು, ಅದರ ಮಾಲೀಕರು ನವೀಕರಣಕ್ಕಾಗಿ ಅರ್ಜಿ ಸಲ್ಲಿಸಲಾಗಿದೆ ಹಾಗೂ ಅದು ಪರಿಶೀಲನೆಯ ಹಂತದಲ್ಲಿದೆ. ಗುತ್ತಿಗೆಯ ಅವಧಿ ಮುಗಿದಿರುವುದರಿಂದ, ಗಣಿಗಾರಿಕೆ ಸ್ಥಗಿತಗೊಳಿಸಲು ನೋಟಿಸ್ ಜಾರಿ ಮಾಡಿ ಗಣಿಗಾರಿಕೆ ಸ್ಥಗಿತಗೊಂಡಿದೆ. ಹೊಸ ನಿಯಮಾವಳಿಯ ಪ್ರಕಾರ ಸುರಕ್ಷಿತ ವಲಯ ಗುರುತಿಸುವವರೆಗೆ ಘಟಕವನ್ನು ಸ್ಥಗಿತಗೊಳಿಸಲು ನೋಟಿಸ್ ಜಾರಿ ಮಾಡಲಾಗಿದೆ. ಕಲ್ಲು ಗುತ್ತಿಗೆಯ ಪ್ರದೇಶದಲ್ಲಿ ಸ್ಫೋಟಕಗಳನ್ನು ಬಳಸಲು ಅನುಮತಿ ನೀಡಿಲ್ಲ. ಆ ಬಗ್ಗೆ ದೂರನ್ನು ಆರಕ್ಷಕ ವೃತ್ತ ನಿರೀಕ್ಷಕರಿಗೆ ದಿ: 23–8–2013 ರಂದು ಪತ್ರದ ಮುಖೇನ ತಿಳಿಸಲಾಗಿದೆ ಎಂದು ಹೇಳಿದ್ದಾರೆ.

4) ಎದುರುದಾರರ ಆಕ್ಷೇಪಣೆಗಳಿಗೆ ದೂರುದಾರರಿಂದ ಪ್ರತ್ಯುತ್ತರ ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ –

ಸರ್ವೆ ನಂ.131 ಹಾಗೂ ಸರ್ವೆ ನಂ.657/36 ರಲ್ಲಿ ಕಲ್ಲು ಗಣಿಗಾರಿಕೆಗೆ ಅನುಮತಿ ಕೊಡಬಾರದೆಂದು ಲಿಖಿತ ನೋಟಿಸ್ ಜಾರಿಯಾಗಿದ್ದರೂ ಸಹ ಎದರುದಾರರು ನಿಯಮ ಉಲ್ಲಂಘಿಸಿ ಕಲ್ಲು ಗಣಿಗಾರಿಕೆಗೆ ಅನುಮತಿ ನೀಡಿದ್ದಾರೆ. ಕಲ್ಲು ಪುಡಿ ಘಟಕ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

5) ದೂರಿನ ಬಗ್ಗೆ ತನಿಖೆ ನಡೆಸಿ ವರದಿ ನೀಡುವಂತೆ, ಆರಕ್ಷಕ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ತುಮಕೂರು ರವರನ್ನು ಸೂಚಿಸಲಾಗಿ, ಸದರಿಯವರು ತಮ್ಮ ವರದಿಯಲ್ಲಿ ಶ್ರೀ ಕೆ.ಎಂ. ಕೃಷ್ಣ ಎನ್ನುವವರಿಗೆ ಸರ್ವೆ ನಂ.131 ರಲ್ಲಿ 4 ಎಕರೆ ಜಮೀನಿನಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಮಂಜೂರಾದಂತಹ 5 ವರ್ಷಗಳ ಗುತ್ತಿಗೆ ಅವಧಿ ಮುಕ್ತಯಗೊಂಡಿದ್ದರೂ ಸಹ ದಿ: 29–6–2010 ರಿಂದ ಇಲ್ಲಿಯವರೆಗೂ ಅನಧೀಕೃತವಾಗಿ, ಕಲ್ಲು ಗಣಿಗಾರಿಕೆ ನಡೆಸಿರಬಹುದೆಂದು, ಹಾಗೂ ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಮೇಲ್ಮನವಿ ಜಂಟಿ ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ರವರ ಮುಂದೆ ವಿಚಾರಣೆಗೆ ಬಾಕಿ ಇದ್ದು, ಸ್ಥಳ ಪರಿಶೀಲನಾ ಸಂದರ್ಭದಲ್ಲಿ ಗಲ್ಲು ಗಣಿಗಾರಿಕೆ ಚಟುವಟಿಕೆಯಲ್ಲಿದ್ದು, ಆ ಸಂದರ್ಭದಲ್ಲಿ ತೆಗೆದಿರುವ

ಟನ್‌ಗಟ್ಟಲೇ ಕಲ್ಲುಗಳನ್ನು ರಾಶಿ ಹಾಕಿರುವುದು ಕಂಡುಬಂದಿದೆ ಎಂದು ಹೇಳಿದ್ದಾರೆ. ಆದರೆ, ಪೂರಕ ದಾಖಲೆಗಳನ್ನು ಹಾಜರುಪಡಿಸಿಲ್ಲ.

6) ತನಿಖಾ ವರದಿಗೆ ದೂರುದಾರರಿಂದ ಪ್ರತ್ಯುತ್ತರ ಕೇಳಿದ್ದು, ತಮ್ಮ ಪ್ರತ್ಯುತ್ತರದಲ್ಲಿ ತನಿಖಾ ವರದಿಯಲ್ಲಿನ ಅಂಶಗಳನ್ನು ಅಲ್ಲಗಳೆದಿರುತ್ತಾರೆ.

7) ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ: ಸದರಿ ಜಮೀನಿಗೆ ಸಂಬಂಧಪಟ್ಟಂತೆ ಶ್ರೀ ಕೃಷ್ಣ ಎಂಬುವವರು ಎದರುದಾರರಿಂದ ಅನುಮತಿ ಪಡೆದು, ಗಣಿಗಾರಿಕೆ ನಡೆಸುತ್ತಿದ್ದು, ಸದರಿ ಗಣಿಗಾರಿಕೆ ಗುತ್ತಿಗೆ ಅವಧಿ ಮುಗಿದಿದ್ದು, ನವೀಕರಣಕ್ಕೆ ಅರ್ಜಿ ಸಲ್ಲಿಸಿರುವುದಾಗಿ ಹೇಳಿದ್ದಾರೆ, ಆದರೆ ನವೀಕರಣಕ್ಕೆ ಅರ್ಜಿ ಸಲ್ಲಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಗಣಿಗಾರಿಕೆಯನ್ನು ಸ್ಥಗಿತಗೊಳಿಸುವ ಬಗ್ಗೆ ದಿ: 5–9–2013 ಮತ್ತು ದಿ: 22–11–2013 ರಂದು ನೋಟಿಸ್ ಜಾರಿ ಮಾಡಿ ಗಣಿಗಾರಿಕೆಯನ್ನು ಸ್ಥಗಿತಗೊಳಿಸಲಾಗಿದೆ ಎಂಬುದಾಗಿ ಎದರುದಾರರು ತಿಳಿಸಿರುತ್ತಾರೆ. ಆದರೆ, ಈ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಬದಲಾಗಿ ತನಿಖಾಧಿಕಾರಿಗಳ ವರದಿಯಲ್ಲಿ ಗಣಿಗಾರಿಕಾ ಅವಧಿ ಮುಕ್ತಾಯವಾಗಿದ್ದರೂ ಸಹ ಅನಧೀಕೃತವಾಗಿ ಗಣಿಗಾರಿಕಾ ಚಟುವಟಿಕೆ ನಡೆಸುತ್ತಿರುವುದು ಕಂಡುಬಂದಿದೆ. ಕರ್ನಾಟಕ ಕಲ್ಲು ಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ 2011–12 ಅನ್ವಯ ಈ ಹಿಂದೆ ಪರಿಸರ ಇಲಾಖೆಯಿಂದ ನೀಡಲಾದ ಪರವಾನಿಗೆ ರದ್ದಾಗಿದ್ದು, ಸದರಿ ನಿಯಮದನ್ವಯ ಸುರಕ್ಷಿತ ವಲಯವನ್ನು ಗುರುತಿಸುವವರೆಗೆ ಘಟಕಗಳನ್ನು ಸ್ಥಗೀತಗೊಳಿಸಲು ನೋಟಿಸ್ ನೀಡಲಾಗಿದೆ ಎಂದು ಹೇಳಿದ್ದಾರೆ. ಆದರೆ ಈ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಲ್ಲು ಗಣಿ ಗುತ್ತಿಗೆ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆಗೆ ಸ್ಫೋಟಕಗಳನ್ನು ಬಳಸಲು ಅವಕಾಶವಿಲ್ಲ, ಆದರೆ ಸ್ಫೋಟಕಗಳನ್ನು ಬಳಸಿ ಅನಧೀಕೃತ ಗಣಿಗಾರಿಕೆ ನಡೆಸುತ್ತಿರುವುದು ಕಂಡುಬಂದಿದೆ. ಸದರಿ ಅನಧಿಕೃತವಾಗಿ ಸ್ಫೋಟಕಗಳನ್ನು ಬಳಸುತ್ತಿದ್ದಾರೆಂದು ಆರಕ್ಷಕ ವೃತ್ತ ನಿರೀಕ್ಷಕರಿಗೆ ಪತ್ರ ಬರೆಯಲಾಗಿದೆ ಎಂಬುದಾಗಿ ಹೇಳಿದ್ದಾರೆ. ಆದರೆ ಈ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಗಣಿಗಾರಿಕೆಯಲ್ಲಿ ಕಾನೂನುಬಾಹಿರವಾಗಿ ಸ್ಫೋಟಕ ಬಳಸುತ್ತಿರುವ ವಿಚಾರ ಎದರುದಾರರಿಗೆ ಗೊತ್ತಿದ್ದರೂ ಸಹ ಸದರಿ ಗಣಿಗಾರಿಕೆಗಳ ಪರವಾನಿಗೆಯನ್ನು ರದ್ದುಪಡಿಸಿ ಅವುಗಳನ್ನು ಸ್ಥಗೀತಗೊಳಿಸುವ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ಗಣಿಗಾರಿಕೆಗಳ ಪರವಾನಿಗೆಯ ಸಂಬಂಧ ಜಂಟಿ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ರವರ ಮುಂದೆ

ಮೇಲ್ಮನವಿ ಬಾಕಿ ಇರುತ್ತದೆ ಎಂಬುದಾಗಿ ತಿಳಿಸಿದ್ದು, ಆದರೆ, ಮೇಲ್ಮನವಿ ನಂ.236/2010 ರ ಮೇಲ್ಮನವಿಯು ಈಗಾಗಲೇ ಇತ್ಯರ್ಥಗೊಂಡಿದ್ದು, ಕಾನೂನು ರೀತಿ ಕ್ರಮ ಜರುಗಿಸುವಂತೆ, ಆದೇಶ ಮಾಡಲಾಗಿರುತ್ತದೆ. ಆದರೆ, ಸದರಿ ಪರವಾನಿಗೆ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ ಅಕ್ರಮ ಗಣಿಗಾರಿಕೆಗೆ ಸಹಕಾರ ನೀಡಿ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ.

7. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

8. ಆದ್ದರಿಂದ, ಅಕ್ರಮವಾಗಿ ಸ್ಫೋಟಕಗಳನ್ನು ಗಳಿಸಿ ಅನಧಿಕೃತವಾಗಿ ಗಣಿಗಾರಿಕೆ ನಡೆಸುತ್ತಿರುವ ಗಣಿಕಾರಿಕೆಗಳ ಪರವಾನಗಿಯನ್ನು ರದ್ದುಪಡಿಸಿ, ಸದರಿ ಗಣಿಗಾರಿಕೆಯನ್ನು ಮುಕ್ತಾಯಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಒಂದು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 2/6/17.

**(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)**
**ಉಪಲೋಕಾಯುಕ್ತ-2,**
**ಕರ್ನಾಟಕ ರಾಜ್ಯ.**